# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್ ರಸ್ತೆ, ತುಮಕೂರು -572103

ಸಂಖ್ಯೆ:ತುವಿ:ಶೈವಿ:2024-25:/1733 ದಿನಾಂಕ:01.08.2024

## ಸುತ್ತೋಲೆ

ವಿಷಯ:- 2024-25ನೇ ಸಾಲಿನ ಸ್ನಾತಕ ಪದವಿಯ ಪಠ್ಯಕ್ರಮದ ಕುರಿತು ಕಾರ್ಯಾಗಾರ ಆಯೋಜಿಸಿರುವ ಬಗ್ಗೆ.

ಉಲ್ಲೇಖ: ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:01.08.2024.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ತುಮಕೂರು ವಿಶ್ವವಿದ್ಯಾನಿಲಯದ 2024-25ನೇ ಶೈಕ್ಷಣಿಕ ಸಾಲಿನ ವಿವಿಧ ಸ್ನಾತಕ ಪದವಿಯ ಪಠ್ಯಕ್ರಮದ ಕುರಿತು ಕಾರ್ಯಾಗಾರವನ್ನು ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ದಿನಾಂಕ:05.08.2024 ರಂದು ಸೋಮವಾರ ಬೆಳಿಗ್ಗೆ 10-15 ಗಂಟೆಗೆ ಡಾ. ಸರ್.ಎಂ. ವಿಶ್ವೇಶ್ವರಯ್ಯ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಸದರಿ ಕಾರ್ಯಾಗಾರಕ್ಕೆ ಮುಖ್ಯ ಅತಿಥಿಗಳಾಗಿ ಶ್ರೀ ಜಗದೀಶ್ ಜಿ., IAS, ಮಾನ್ಯ ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ಹಾಗೂ ಸಂಪನ್ಮೂಲ ವ್ಯಕ್ತಿಗಳಾಗಿ ಡಾ. ಭಾಗ್ಯವಾನ ಎಸ್ ಮುದಿಗೌಡ್ರ, ಸದಸ್ಯ ಕಾರ್ಯದರ್ಶಿಗಳು, ರಾಜ್ಯ ಶಿಕ್ಷಣ ನೀತಿ, ಕರ್ನಾಟಕ ಸರ್ಕಾರ, ಬೆಂಗಳೂರು ಇವರುಗಳು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಸದರಿ ಕಾರ್ಯಾಗಾರದಲ್ಲಿ ವಿಶ್ವವಿದ್ಯಾನಿಲಯದ ಘಟಕ ಮತ್ತು ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರುಗಳು ಹಾಗೂ ಎಲ್ಲಾ ವಿಷಯಗಳ ಅಧ್ಯಯನ ಮಂಡಳಿಗಳ ಅಧ್ಯಕ್ಷರು ಮತ್ತು ಸದಸ್ಯರುಗಳು ಭಾಗವಹಿಸುವಂತೆ ಮಾನ್ಯ ಕುಲಪತಿಗಳ ಅನುಮೋದನೆ ಮೇರೆಗೆ ಈ ಮೂಲಕ ತಿಳಿಸಲಾಗಿದೆ.

ಮುಂದುವರೆದಂತೆ, ಸದರಿ ದಿನಾಂಕದ ಅಪರಾಹ್ನ ಎಲ್ಲಾ BOS ನ ಅಧ್ಯಕ್ಷರು ಮತ್ತು ಸದಸ್ಯರುಗಳು ಸಭೆ ಸೇರಿ ಪಠ್ಯಕ್ರಮದ ರೂಪು ರೇಷೆಗಳ ಬಗ್ಗೆ ಚರ್ಚಿಸತಕ್ಕದ್ದು.

ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ

1. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯದ ಘಟಕ ಮತ್ತು ಎಲ್ಲಾ ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಅಧ್ಯಕ್ಷರು ಮತ್ತು ಸದಸ್ಯರುಗಳು, ವಿವಿಧ ವಿಷಯಗಳ ಸ್ನಾತಕ ಅಧ್ಯಯನ ಮಂಡಳಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – ಸಂಬಂಧಪಟ್ಟ ಕಾಲೇಜುಗಳ ಪ್ರಾಂಶುಪಾಲರಿಗೆ ಮತ್ತು ಬಿ.ಓ.ಎಸ್.ನ ಅಧ್ಯಕ್ಷರು ಮತ್ತು ಸದಸ್ಯರುಗಳಿಗೆ ಸುತ್ತೋಲೆಯನ್ನು ಇ-ಮೇಲ್ ಮುಖಾಂತರ ಕಳುಹಿಸುವುದು ಹಾಗೂ ಜಾಲತಾಣದಲ್ಲಿ ಪ್ರಕಟಿಸುವುದು.

ಪ್ರತಿಗಳು:

1. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಕಛೇರಿ ಪ್ರತಿ.